**ದಿನಾಂಕಃ 03.01.2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀ. ಎನ್.ಎಂ.ಎಸ್ ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ವಿಚಾರಗಳನ್ನು ನಾನೇ ನನ್ನ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ ಎಂದು ತಿಳಿದು ಸಹಿ ಮಾಡಿರುತ್ತೇನೆ.

ದಿನಾಂಕ 25.09.2020 ರ ಕ್ರಯದ ಕರಾರು ಪತ್ರದ ಮೂಲ ಪ್ರತಿಯನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-1 ಎಂದು, ಹೊಸಹಳ್ಳಿ ಗ್ರಾಮದ ಸರ್ವೆ ನಂ. 161/2 ರ ಪಹಣಿ ಪತ್ರಿಕೆಯ ಗಣಕೀಕೃತ ನಕಲನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-2 ಎಂದು, ದಿನಾಂಕ 19.05.2022 ರ ತಿಳುವಳಿಕೆ ಪತ್ರದ ಕಛೇರಿ ಪ್ರತಿಯನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-3 ಎಂದು, 6 ಆರ್ ಪಿ ಎ ಡಿ ರಶೀದಿಗಳನ್ನು ಹಾಜರುಪಡಿಸುತ್ತಿದ್ದು ಅವುಗಳನ್ನು ಒಟ್ಟಾಗಿ ನಿಪಿ-4 ಎಂದು, ಜಾರಿಯಾಗದೇ ವಾಪಸ್ ಆದ 6 ಅಂಚೆ ಲಕೋಟೆಗಳನ್ನು ಹಾಜರುಪಡಿಸುತ್ತಿದ್ದು ಅವುಗಳನ್ನು ನಿಪಿ-5 ರಿಂದ 10 ಎಂದು, ಸದರಿ ಅಂಚೆ ಲಕೋಟೆಯ ಒಳಗಿರುವ ತಿಳುವಳಿಕೆ ಪತ್ರಗಳನ್ನು ನಿಪಿ-5 ಎ ಯಿಂದ ನಿಪಿ-10 ಎ ಎಂದು, ವಾದಿಯ ಬ್ಯಾಂಕ್ ಸ್ಟೇಟ್ ಮೆಂಟ್ ಅನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-11 ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ಪ್ರತಿವಾದಿಗಳು ಪ್ರತಿವಾದ ಪತ್ರವನ್ನು ಸಲ್ಲಿಸದೇ ಇರುವುದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇದೆ.,

ಹೆಚ್ಚುವರಿ ಸಿವಿಲ್ ಮತ್ತು ಜೆ ಎಮ್ ಎಫ್ ಸಿ
ನ್ಯಾಯಾಧೀಶರು, ತಿ.ನರಸಿಪುರ